ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ರೈತರ ಕೃಷಿ ಚಟುವಟಿಕೆಗೆ ಸಮರ್ಪಕ ವಿದ್ಯುತ್ ಪೂರೈಸುವ ಬಗ್ಗೆ

ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ) -

549 (570) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಒದಗಿಸಲು ಸೂಕ್ತವಾದಂತಹ ಸಮಯವನ್ನು ಸರ್ಕಾರ ನಿಗಧಿ ಮಾಡಿದೆಯೇ;

(ಆ) ಪ್ರಸ್ತುತ ಕೃಷಿ ಚಟುವಟಿಕೆಗೆ ಎಷ್ಟು ಸಮಯ 3 ಫೇಸ್ ವಿದ್ಯುತ್ ನೀಡಲಾಗುತ್ತಿದೆ;

(ಇ) ಇನ್ನು ಹೆಚ್ಚಿನ ಅವಧಿ 3 ಫೇಸ್ ವಿದ್ಯುತ್ ನೀಡಿ ರೈತರಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಆಲೋಚಿಸಿದೆಯೇ;

(ಈ) ರೈತರಿಗೆ ಟ್ರಾನ್ಸ್‌ಫಾರ್ಮರ್ (T.C) ಗಳನ್ನು ಸಮರ್ಪಕವಾಗಿ ಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳಿಂದ ವಿಳಂಬ ಧೋರಣೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಶೀಘ್ರವಾಗಿ ರೈತರಿಗೆ (T.C) ಗಳನ್ನು ವಿತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)